# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

## ಟಿ. ನರಸೀಪುರ.

## ಸಿ. ಸಿ ನಂ. 109/2023

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ಧ

ಆರೋಪಿತರು : 1. ಲಿಂಗಯ್ಯ ಬಿನ್ ಲೇಟ್ ಲಿಂಗಯ್ಯ, 63 ವರ್ಷ,

2. ಸೋಮಣ್ಣ ಬಿನ್ ಲಿಂಗಯ್ಯ, 40 ವರ್ಷ,

3. ಲಿಂಗಣ್ಣ ಬಿನ್ ನಿಂಗಯ್ಯ, 50 ವರ್ಷ,
ವಾಸಃ ನಂ.40/80, 3 ನೇ ಕ್ರಾಸ್,
ಕೈಲಾಸ್ ನಗರ, ವಸಂತಪುರ ಮುಖ್ಯ ರಸ್ತೆ
ಹತ್ತಿರ, ದೊಡ್ಡಕಲ್ಲಸಂದ್ರ, ಬೆಂಗಳೂರು-62.

4. ನಂಜುಂಡ,
ಬಿನ್ ಅಪ್ಪಯ್ಯನ ಮಗ ಲಿಂಗಯ್ಯ, 47 ವರ್ಷ,

**1, 2 ಮತ್ತು 4 ನೇ ಆರೋಪಿತರ** ವಾಸಃ ನಂಜಾಪುರ ಗ್ರಾಮ,
ಬನ್ನೂರು ಹೋಬಳಿ, ಟಿ.ನರಸೀಪುರ
ತಾಲ್ಲೂಕು, ಮೈಸೂರು ಜಿಲ್ಲೆ.

## ದೋಷಾರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿನಾಂಕ 10.04.2022 ರಂದು ಮಧ್ಯಾಹ್ನ 1.30 ಗಂಟೆ ಸಮಯದಲ್ಲಿ ತಿ.ನರಸೀಪುರ ತಾಲ್ಲೂಕು ಬನ್ನೂರು ಪೊಲೀಸ್ ಠಾಣೆ ಸರಹದ್ದು ನಂಜಪುರ ಚಾಸಾ-2 ನಂಜಯ್ಯರವರಿಗೆ ಸೇರಿದ ಸರ್ವೆ ನಂಬರ್ 8/1 ರಲ್ಲಿ 0.06 ಗುಂಟೆ ಜಮೀನಿದ್ದು ಚಾಸಾ-1 ಚಂದ್ರ ಎನ್ ಮತ್ತು ಚಾಸಾ-2 ನಂಜಯ್ಯರವರು ಜಮೀನಿನ ವಿಚಾರವಾಗಿ ಜಮೀನಿನ ಬಳಿ ಹೋಗಿದ್ದು, 1 ನೇ ಆರೋಪಿಯಾದ ನಿಮ್ಮನ್ನು ನೀವು ಮನೆಗೆ ಹಿರಿಯ ಮಗನಾಗಿದ್ದು ನಮಗೆ ಬರಬೇಕಾದ ಜಮೀನನ್ನು ನಮ್ಮ ಹೆಸರಿಗೆ ಬರೆಯಿಸಿ ವಿಭಾಗ ಮಾಡಿಕೊಡು ಎಂದು ಕೇಳುತ್ತಿದ್ದಾಗ ಆಟೋಪಿತರಾದ ನೀವು ಸಮಾನ

ಉದ್ದೇಶ ಹೊಂದಿ ಅವರ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-1 ಮತ್ತು 2 ರವರನ್ನು ಬೆಂಗಳೂರಿನಲ್ಲಿ ಇದ್ದೀರ ತೆಪ್ಪಗಿರಿ ನಿಮಗೆ ಯಾವುದೇ ಆಸ್ತಿ ಕೊಡುವುದಿಲ್ಲ ಬೋಳಿ ಮಕ್ಕಳ ಎಂದು ಅವಾಚ್ಯ ಶಬ್ದದಿಂದ ನಿಂದಿಸಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.504 ಸಹ ವಾಚಕ ಕಲಂ 34 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ, ಆರೋಪಿತರಾದ ನೀವು ಸಮಾನ ಉದ್ದೇಶ ಹೊಂದಿ ಅವರ ಪೈಕಿ 3 ನೇ ಆರೋಪಿಯಾದ ನೀವು ಚಾಸಾ-2 ನಂಜಯ್ಯರವರನ್ನು ತಬ್ಬಿ ಹಿಡಿದುಕೊಂಡು ಅಕ್ರಮ ತಡೆ ಉಂಟು ಮಾಡಿದ್ದು, ಆ ಮೂಲಕ ಆರೋಪಿತರಾದ ನೀವುಗಳು ಭಾರತೀಯ ದಂಡ ಸಂಹಿತೆ ಕಲಂ.341 ಸಹ ವಾಚಕ ಕಲಂ 34 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ, ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಅವರ ಪೈಕಿ 1 ಮತ್ತು 2 ನೇ ಆರೋಪಿತರಾದ ನೀವು, ಅಲ್ಲೆ ಬಿದ್ದಿದ್ದ ಕಲನ್ನು ತೆಗೆದುಕೊಂಡು ಚಾಸಾ-1 ಚಂದ್ರ.ಎನ್ ಮತ್ತು ಚಾಸಾ-2 ನಂಜಯ್ಯರವರ ತಲೆಗೆ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.324 ಸಹ ವಾಚಕ ಕಲಂ 34 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ, ಆರೋಪಿತರಾದ ನೀವು ಮತ್ತೊಮ್ಮೆ ಜಮೀನಿನ ವಿಚಾರಕ್ಕೆ ಬಂದರೆ ನಿಮ್ಮ ಅಪ್ಪ, ಮಕ್ಕಳನ್ನು ತಿಥಿ ಕಾಣಿಸದೆ ಬಪಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.506 ಸಹ ವಾಚಕ ಕಲಂ 34 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ **11.02.2026.**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

## <u>ಆರೋಪಿತರ ಹೇಳಿಕೆ</u>

ಪ್ರಶ್ನೆ- 1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ 1 ನೇ ಆರೋಪಿಃ

2 ನೇ ಆರೋಪಿಃ

3 ನೇ ಆರೋಪಿಃ

4 ನೇ ಆರೋಪಿಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?

ಉತ್ತರಃ 1 ನೇ ಆರೋಪಿಃ

2 ನೇ ಆರೋಪಿಃ

3 ನೇ ಆರೋಪಿಃ

4 ನೇ ಆರೋಪಿಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

## <u>ಆರೋಪಿತರ ಸಹಿ</u>

1 ನೇ ಆರೋಪಿಃ

2 ನೇ ಆರೋಪಿಃ

3 ನೇ ಆರೋಪಿಃ

4 ನೇ ಆರೋಪಿಃ